# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 573 |
| ಸದಸ್ಯರ ಹೆಸರು | : | ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 08.12.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಾಸನ ಜಿಲ್ಲೆ ಚನ್ನರಾಯಪಟ್ಟಣ ಗ್ರಾಮ ಪಂಚಾಯತ್ ವ್ಯಾಪ್ತಿಯ ಬಳದರೆ ಗ್ರಾಮದ ಸರ್ವೆ ನಂಬರ್ 260 ರ 2 ಎಕರೆ 20 ಗುಂಟೆ ಪ್ರದೇಶದಲ್ಲಿ ವಾಣಿಜ್ಯ ಅಕ್ರಮ ಕಟ್ಟಡವನ್ನು ತೆರವುಗೊಳಿಸಲು ಗ್ರಾಮ ಪಂಚಾಯತ್ ಪಿ.ಡಿ.ಓ ಮತ್ತು ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳಿಂದ ವರದಿಯನ್ನು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಹಾಸನ ಜಿಲ್ಲಾ ಪಂಚಾಯತ್‌ರವರಿಗೆ ಸ್ವೀಕೃತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮದ ಬಗ್ಗೆ ವಿವರ ನೀಡುವುದು; | ಹಾಸನ ಜಿಲ್ಲೆ, ಚನ್ನರಾಯಪಟ್ಟಣ ಗ್ರಾಮ ಪಂಚಾಯತ್ ವ್ಯಾಪ್ತಿಯ ಬಳದರೆ ಗ್ರಾಮದ ಸರ್ವೆ ನಂಬರ್ 260ರ 2 ಎಕರೆ 20 ಗುಂಟೆ ಪ್ರದೇಶದಲ್ಲಿ ವಾಣಿಜ್ಯ ಅಕ್ರಮ ಕಟ್ಟಡವನ್ನು ತೆರವುಗೊಳಿಸುವ ಸಂಬಂಧ ದಿನಾಂಕ:15-11-2022 ಮತ್ತು 21-03-2023 ರಂದು ಕಟ್ಟಡ ನಿರ್ಮಾಣವನ್ನು ಸ್ಥಗಿತಗೊಳಿಸುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರು ಮಾಲೀಕರಿಗೆ ನೋಟಿಸ್ ನೀಡಿರುತ್ತಾರೆ.<br><br>ಮುಂದುವರೆದು ರಸ್ತೆಯು ಲೋಕೋಪಯೋಗಿ ಇಲಾಖಾ ವ್ಯಾಪ್ತಿಗೆ ಒಳಪಡುವುದರಿಂದ ಅಳತೆ ಮಾಡಿಸಿ ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರದವರು ತಿಳಿಸಿರುವಂತೆ ತೆರವುಗೊಳಿಸಲು ಗ್ರಾಮ ಪಂಚಾಯತ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರು ದಿನಾಂಕ:21-08-2023ರಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಚನ್ನರಾಯಪಟ್ಟಣ ರವರಿಗೆ ಪತ್ರ ಸಲ್ಲಿಸಿರುತ್ತಾರೆ. |
| (ಆ) | ಈ ಬಗ್ಗೆ ಮಾನ್ಯ ಶಾಸಕರು, ಕರ್ನಾಟಕ ವಿಧಾನ ಪರಿಷತ್ತು, ಹಾಸನರವರು ಲಿಖಿತ ಮನವಿಯ ಮುಖಾಂತರ ಹಾಸನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಗಮನಕ್ಕೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು) | ಬಂದಿದೆ.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ, ಇವರು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚನ್ನರಾಯಪಟ್ಟಣ ರವರಿಗೆ ನಿರ್ದೇಶನ ನೀಡಲಾಗಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರು ರಸ್ತೆಯು ಲೋಕೋಪಯೋಗಿ ಇಲಾಖಾ ವ್ಯಾಪ್ತಿಗೆ ಒಳಪಡುವುದರಿಂದ ಅಳತೆ ಮಾಡಿಸಿ ನಗರ |

| | | |
|---|---|---|
| | | ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರದವರು ತಿಳಿಸಿರುವಂತೆ ತೆರವುಗೊಳಿಸಲು ಗ್ರಾಮ ಪಂಚಾಯತ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರು ದಿನಾಂಕ:21-08-2023 ರಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಚನ್ನರಾಯಪಟ್ಟಣ ರವರಿಗೆ ಪತ್ರ ಸಲ್ಲಿಸಿರುತ್ತಾರೆ.<br><br>ಆದರೆ, ಪ್ರಸ್ತುತ ಸದರಿ ಪ್ರಕರಣವು ಮಾನ್ಯ ADDL. CIVIL JUDGE AND JMFC CHANNARAYAPATTANA HASSAN ನ್ಯಾಯಾಲಯದ OS/ 270/ 2023 ರಲ್ಲಿ ದಾಖಲಾಗಿ ದಿನಾಂಕ:03-11-2023ರಂದು ನೀಡಿರುವ ಆದೇಶ ಈ ಕೆಳಕಂಡಂತಿದೆ.<br>"The defendants, their legal representatives, agents, servants or anybody actiong on their behalf are hereby temporarily restrained from interfering the peaceful possession and enjoyment of the suit property and business which is running in the suit schedule property till disposal of the suit".<br>ಮಾನ್ಯ ನ್ಯಾಯಾಲಯದ ಮುಂದಿನ ಆದೇಶದಂತೆ, ನಿಯಮಾನುಸಾರ ಕ್ರಮ ವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 604 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.